# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಹೆಚ್. ಎಸ್ ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 291 |
| ಉತ್ತರಿಸಬೇಕಾದ ದಿನಾಂಕ | : | 14.09.2022 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪಶುಸಂಗೋಪನೆ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು, ಕಂಪನಿಗಳು, ಶಾಸನಬದ್ದ ಮಂಡಳಿಗಳು, ಉದ್ದಿಮೆಗಳು, ಅಂಗ್ಲ ಸಂಸ್ಥೆಗಳು ಮತ್ತು ಸೊಸೈಟಿಗಳ ಸಂಖ್ಯೆ ಎಷ್ಟು; ಅವು ಯಾವುವು; | ಪಶುಸಂಗೋಪನೆ ಇಲಾಖೆ ಅಧೀನದಲ್ಲಿ ಬರುವ ಸಾರ್ವಜನಿಕರ ನಿಗಮಗಳು/ಕಂಪನಿಗಳು ಶಾಸನಬದ್ದ ಮಂಡಳಿಗಳು / ಉದ್ದಿಮೆಗಳು / ಅಂಗ ಸಂಸ್ಥೆಗಳ ಸಂಖ್ಯೆ: 07.<br>1) ಕರ್ನಾಟಕ ಸಹಕಾರ ಕುರಿ ಮತ್ತು ಮೇಕೆ ಸಾಕಾಣಿಕೆದಾರರ ಸಂಘಗಳ ಮಹಾ ಮಂಡಳ ನಿಯಮಿತ ಕರ್ನಾಟಕ ಸ್ಟೇಟ್ ಆಗ್ರೋ ಕಾರ್ನ ಪ್ರೈವೇಟ್ ಲಿಮಿಟೆಡ್‌ನ ಕಟ್ಟಡ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು-560024.<br>ದೂರವಾಣಿ ಸಂಖ್ಯೆ: 080-29731030/29731075<br>ಇ-ಮೇಲ್: kcsgf2016@yahoo.com<br>ಇದರ ಅಡಿಯಲ್ಲಿ 345 ಸದಸ್ಯ ಸಂಘಗಳಿರುತ್ತವೆ.<br>2) ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ದಿ ನಿಗಮ ನಿಯಮಿತ, ಕುರಿಭವನ, ಹೆಬ್ಬಾಳ, ಬೆಂಗಳೂರು-560024<br>ದೂರವಾಣಿ: 23414295, 23413294<br>ಇ-ಮೇಲ್ : kswdcl@gmail.com<br>ಇದರ ಅಡಿಯಲ್ಲಿ 664 ಸಹಕಾರ ಸಂಘಗಳು ಸಂಯೋಜನೆಗೊಂಡಿರುತ್ತವೆ.<br>3) ಕರ್ನಾಟಕ ಸಹಕಾರ ಕುಕ್ಕುಟ ಮಹಾ ಮಂಡಳಿ ನಿ., ಕೇಂದ್ರ ಕಛೇರಿ, ಪಶುಪಾಲನಾ ಭವನದ ಹಿಂಭಾಗ, ಬೆಂಗಳೂರು-560024<br>ದೂರವಾಣಿ ಸಂಖ್ಯೆ: 080-29902415<br>ಇ-ಮೇಲ್ ಐಡಿ: mdkcpfbangalore@gmail.com<br>ಇದರ ಅಡಿಯಲ್ಲಿ ಒಟ್ಟು 199 ಪ್ರಾಥಮಿಕ ಕೋಳಿ ಸಾಕಾಣಿಕ ಸಂಘಗಳು ಸದಸ್ಯತ್ವವನ್ನು ಹೊಂದಿರುತ್ತದೆ.<br>4) ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾ ಮಂಡಳಿ ನಿಯಮಿತ, ಡಾ. ಎಂ.ಹೆಚ್. ಮರಿಗೌಡ ರಸ್ತೆ, ಅಂಚೆ ಸಂಖ್ಯೆ 2915 ಬೆಂಗಳೂರು.<br>ದೂರವಾಣಿ ಸಂಖ್ಯೆ: 080-26096800, 25536625<br>ಇ-ಮೇಲ್ : ahykmf@yahoo.com<br>ಇದರ ಅಡಿಯಲ್ಲಿ ಒಟ್ಟು 14914 ಹಾಲು ಉತ್ಪಾದಕರ ಸಹಕಾರ ಸಂಘಗಳು ಸದಸ್ಯತ್ವವನ್ನು ಹೊಂದಿರುತ್ತವೆ. |

| | | |
|---|---|---|
| | | 5) ಕರ್ನಾಟಕ ಪ್ರಾಣಿ ಕಲ್ಯಾಣ ಮಂಡಳಿ, ಪಶುಪಾಲನಾ ಭವನದ ಹಿಂಭಾಗ, ಬೆಂಗಳೂರು-560024<br>ದೂರವಾಣಿ ಸಂಖ್ಯೆ: 080-299021411<br>ಇ-ಮೆಲ್ ಐಡಿ: kawb2021@gmail.com<br><br>6) ಕರ್ನಾಟಕ ಜಾನುವಾರು ಅಭಿವೃದ್ಧಿ ಸಂಸ್ಥೆ. ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳು, ಪಶುಪಾಲನಾ ಭವನ, ಹೆಬ್ಬಾಳ, ಬೆಂಗಳೂರು-24<br>ದೂರವಾಣಿ ಸಂಖ್ಯೆ: 080-29533854<br>ಇ-ಮೆಲ್ ಐಡಿ: pdkldabangalore@gmail.com<br><br>7) ಕರ್ನಾಟಕ ಪಶುವೈದ್ಯಕೀಯ ಪರಿಷತ್ತು ಹೆಬ್ಬಾಳ, ಬೆಂಗಳೂರು 560024<br>ದೂರವಾಣಿ ಸಂಖ್ಯೆ: 080-23516740/29735133<br><br>ಇ-ಮೆಲ್ ಐಡಿ: kvc.bangalore@gmail.com |
| ಆ | ಸದರಿ ಇಲಾಖೆಯಡಿ ಹಾಲಿ ಚಾಲ್ತಿಯಲ್ಲಿರುವ ಯೋಜನೆಗಳಾವುವು; | ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಹಾಲಿ ಜಾರಿಯಲ್ಲಿರುವ ಯೋಜನೆಗಳನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಇ) | ಪಶುಸಂಗೋಪನೆ ಇಲಾಖೆಯ ಅಧೀನದಲ್ಲಿ ಎಷ್ಟು ನಿಧಿಗಳು ಇವೆ; ಖರ್ಚು ಮಾಡಲು ಇರುವ ಮಾರ್ಗಸೂಚಿಗಳಾವುವು; | ಯಾವುದು ಇರುವುದಿಲ್ಲ. |
| ಈ) | ಇಲ್ಲಿಯವರೆಗೆ ಖರ್ಚು ಮಾಡಲಾದ ಹಾಗೂ ಉಳಿದಿರುವ ಹಣ ಎಷ್ಟು ? | |

**ಇ- ಪಸಂಮೀ 185 ಸಲೆವಿ 2022**

(ಪ್ರಭು ಬಿ. ಚವ್ಹಾಣ್)
**ಪಶುಸಂಗೋಪನೆ ಸಚಿವರು**

## ಶ್ರೀ ಹೆಚ್. ಎಸ್ ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 321 (291) ಗೆ ಅನುಬಂಧ-1

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಪಶುಸಂಗೋಪನೆಯ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

| ಕ್ರ.ಸಂ. | ಕಾರ್ಯಕ್ರಮ | ವಿವರ |
|---|---|---|
| 1 | 2 | 3 |
| 1 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013 ರ ಅನ್ವಯ ಬಳಕೆಯಾಗದ ಮೊತ್ತ | • ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಹಾಲು ಕರೆಯುವ ಯಂತ್ರ ಮತ್ತು ಹಸುಗಳ ನೆಲಹಾಸು ಇವುಗಳನ್ನು ಶೇ 90 ರ ಸಹಾಯಧನದೊಂದಿಗೆ ವಿತರಿಸಲಾಗುವುದು. |
| 2 | ಲಸಿಕಾ ಕಾರ್ಯಕ್ರಮ | • ಗುರುತಿಸಲ್ಪಟ್ಟ ಸಾಂಕ್ರಾಮಿಕ ರೋಗಗಳ ವಿರುದ್ಧ ಲಸಿಕೆ ಹಾಕುವುದು.<br>• ಕಾಲುಬಾಯಿ ಜ್ವರ ಮತ್ತು ಕಂದು ರೋಗಗಳ ವಿರುದ್ಧ ಲಸಿಕಾ ಕಾರ್ಯಕ್ರಮಕ್ಕೆ ಶೇ 100 ಕೇಂದ್ರದ ಅನುದಾನ<br>• ಆಸ್ಕಾಡ್ ಯೋಜನೆಯಡಿಯಲ್ಲಿ ಶೇ 60 ಕೇಂದ್ರ ಪಾಲು ಹಾಗೂ ಶೇ 40 ರಾಜ್ಯದ ಪಾಲು ಅನುಪಾತದಲ್ಲಿ ಅನುದಾನ (ಗಳಲೆ ರೋಗ, ಚಪ್ಪೆ ರೋಗ, ಕರಳು ಬೇನೆ, ನೆರಡಿ ರೋಗಗಳ ವಿರುದ್ಧ ಲಸಿಕೆ ಹಾಕುವುದು)<br>• ಪಿ.ಪಿ.ಆರ್ ರೋಗದ ವಿರುದ್ಧ ಲಸಿಕಾ ಕಾರ್ಯಕ್ರಮಕ್ಕೆ ಶೇ 60 ಕೇಂದ್ರದ ಪಾಲು ಹಾಗೂ ಶೇ 40 ರಾಜ್ಯದ ಪಾಲು ಅನುಪಾತದಲ್ಲಿ ಅನುದಾನ |
| 3 | ಪಿಂಜರಾಪೋಲ್ ಮತ್ತು ಇತರೆ ಗೋಶಾಲೆಗಳಿಗೆ ಬೆಂಬಲ | • ಪಿಂಜರಾಪೋಲ್ ಹಾಗೂ ಇತರೆ ಗೋಶಾಲೆಗಳಲ್ಲಿರುವ ಪ್ರಾಣಿಗಳ ನಿರ್ವಹಣೆ<br>• ಪ್ರತಿ ಜಿಲ್ಲೆಗೆ ಒಂದರಂತೆ ಗೋಶಾಲೆ ನಿರ್ವಹಣೆ |
| 4 | ಕರ್ನಾಟಕ ಕುರಿ ಮತ್ತು ಕುರಿ ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ | • ನಿಗಮದಲ್ಲಿ ನೊಂದಣಿಯಾಗಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಪರಿಶಿಷ್ಟ ಪಂಗಡದ ಸದಸ್ಯರುಗಳಿಗೆ 6+1 ಕುರಿ / ಮೇಕೆ ಘಟಕ ವಿತರಿಸುವುದು.<br>• ವಲಸೆ ಕುರಿಗಾರರಿಗೆ ಸಂಚಾರಿ ಟೆಂಟ್, ಸೋಲಾರ್ ಟಾರ್ಚ್, ರಬ್ಬರ್ ಫ್ಲೂರ್ ಮ್ಯಾಟ್ ಮತ್ತು ರೇನ್ ಕೋಟ್ ಸೇರಿದಂತೆ ಪರಿಕರಗಳ ಕಿಟ್‌ಗಳ ವಿತರಣೆ ಮಾಡಲಾಗುವುದು.<br>• ಕುರಿಗಾರರಿಗೆ ವೈಜ್ಞಾನಿಕ ಕುರಿ ಸಾಕಾಣಿಕೆಯಲ್ಲಿ ತರಬೇತಿ ನೀಡಲಾಗುವುದು |
| 5 | ರಾಷ್ಟ್ರೀಯ ಜಾನುವಾರು ಮಿಷನ್ (ಕೇಂದ್ರ ಪುರಸ್ಕೃತ ಯೋಜನೆ) | • ಸಮಗ್ರ ಕುಕ್ಕುಟ ಅಭಿವೃದ್ಧಿ, ಹಿತ್ತಲ ಕುರಿ / ಮೇಕೆ, ಹಂದಿ ಅಭಿವೃದ್ಧಿ ಯೋಜನೆ.<br>• ವಿಪತ್ತು ನಿರ್ವಹಣೆ – ಜಾನುವಾರು ವಿಮಾ ಯೋಜನೆ.<br>• ಜಾನುವಾರುಗಳ ಆಕಸ್ಮಿಕ ಮರಣಕ್ಕೆ ಪರಿಹಾರಧನ |
| 6 | ಹಾಲು ಉತ್ಪಾದಕರಿಗೆ ಉತ್ತೇಜನ | • ಹಾಲು ಉತ್ಪಾದನೆಗೆ ಉತ್ತೇಜನ ನೀಡಲು ಕರ್ನಾಟಕ ಹಾಲು ಮಹಾ ಮಂಡಳಿಗೆ ಹಾಲು ಸರಬರಾಜು ಮಾಡುವ ಸದಸ್ಯರಿಗೆ ಪ್ರತಿ ಲೀಟರಗೆ ರೂ.5/- ರಂತೆ ಪ್ರೋತ್ಸಾಹಧನ ನೀಡಲಾಗುವುದು. |

| | | |
|---|---|---|
| 7 | ವಿಸ್ತರಣಾ ಘಟಕಗಳ ಬಲಪಡಿಸುವಿಕೆ. | • ಮಿಶ್ರ ತಳಿ ಕರುಗಳ / ಜಾನುವಾರು ಪ್ರದರ್ಶನ, ಹಾಲು ಕರೆಯುವ ಸ್ಪರ್ಧೆ, ಪ್ರಾಣಿ ಜನ್ಯ ರೋಗಗಳ ಜಾಗೃತಿ ಶಿಬಿರ ರೈತರ ತರಬೇತಿ ಮತ್ತು ಪ್ರವಾಸ, ಜಿಲ್ಲಾ ಮಟ್ಟದ ಪಶುಮೇಳ, ಜಾನುವಾರು ಜಾತ್ರೆ, ತಾಂತ್ರಿಕ ಸಂಕಿರಣ. |
| 8 | ಜಾನುವಾರುಗಳ ಆರೋಗ್ಯ ಶಿಬಿರ | • ಉಚಿತ ಜಾನುವಾರು ಚಿಕಿತ್ಸಾ ಶಿಬಿರಗಳನ್ನು ಏರ್ಪಡಿಸುವ ಮೂಲಕ ಜಾನುವಾರುಗಳ ಆರೋಗ್ಯ ತಪಾಸಣೆ ಮಾಡಲಾಗುತ್ತಿದೆ |
| 9 | ಪಶುಭಾಗ್ಯ ಯೋಜನೆ | • ಆರ್ಕವಿಪ್ಪ, ಮತ್ತು ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮಗಳಲ್ಲಿ ಬಳಕೆಯಾಗದೇ ಉಳಿದ ಅನುದಾನದಲ್ಲಿ ಕೃಷಿ ಕಾರ್ಮಿಕರು, ವಿಧವೆಯರು, ದೇವದಾಸಿಯವರು, ನಿರ್ಗತಿಕ ಮಹಿಳೆಯರಿಗೆ ಸ್ವಾವಲಂಬಿ ಜೀವನವನ್ನು ನಡೆಸಲು ಹೈನು ಘಟಕ, ಕುರಿ / ಮೇಕೆ ಘಟಕ ಮತ್ತು ಹಂದಿ ಘಟಕ ಸ್ಥಾಪನೆ ಮಾಡಲು ಸಹಾಯಧನ ನೀಡಲಾಗುತ್ತಿದೆ |
| 10 | ಪಶು ಸಂಜೀವಿನಿ | • ಪಶುಪಾಲಕರ ಮನೆಯ ಬಾಗಿಲಲ್ಲಿ ರೋಗಗ್ರಸ್ತ ಜಾನುವಾರುಗಳಿಗೆ ವಿಶೇಷ ತುರ್ತು ಚಿಕಿತ್ಸೆ ನೀಡಲು 15 ಜಿಲ್ಲೆಗಳಲ್ಲಿ "ಸುಸಜ್ಜಿತ ಪಶುಚಿಕಿತ್ಸಾ ವಾಹನ" ಗಳನ್ನು ಒದಗಿಸಲಾಗಿದೆ. |
| 11 | ಅಮೃತ ಸಿರಿ | • ಇಲಾಖೆಯ ಎಲ್ಲಾ ಜಾನುವಾರು ಕ್ಷೇತ್ರಗಳಲ್ಲಿ ಹುಟ್ಟುವ ಹೆಚ್ಚುವರಿ ಹೆಣ್ಣು ಕರುಗಳನ್ನು / ಕಡಸುಗಳನ್ನು / ಹಸುಗಳನ್ನು, ಪುಸ್ತಕ ಬೆಲೆಯ ಶೇಕಡ 25 ರಂತೆ ಜಿಲ್ಲೆಯ ರೈತರಿಗೆ ದೇವದಾಸಿಯರಿಗೆ, ವಿಧವೆಯವರಿಗೆ, ಶವ ಸಂಸ್ಕಾರ ಕಾರ್ಮಿಕರಿಗೆ ವಿತರಣೆ ಮಾಡಲಾಗುವುದು. |
| 12 | ಅಮೃತ ಧಾರೆ | • ಇಲಾಖೆಯ ಎಲ್ಲಾ ಜಾನುವಾರು ಕ್ಷೇತ್ರಗಳಲ್ಲಿ ಹುಟ್ಟುವ ಹೆಚ್ಚುವರಿ ಗಂಡು ಕರುಗಳನ್ನು / ಬೀಜದ ಹೋರಿಗಳನ್ನು ಇಲಾಖೆ ನಿಗದಿ ಪಡಿಸಿದ ಮಾರಾಟದ ಬೆಲೆಯಂತೆ ರೈತರಿಗೆ, ವಿತರಣೆ ಮಾಡಲಾಗುವುದು. |
| 13 | ಸಮಗ್ರ ಗೋಸಂಕುಲ ಸಮೃದ್ಧಿ ಯೋಜನೆ | • ಗಿರ್, ಸಾಹಿವಾಲ್, ಥಾರ್ ಪಾರ್ಕರ್, ಒಂಗೋಲ್, ದೇವಣಿ ತಳಿಗಳ ಮಾತೃ ಕೇಂದ್ರವನ್ನು ಸ್ಥಾಪಿಸುವುದು. |
| 14 | ಪ್ರಾಣಿಕಲ್ಯಾಣ ಸಹಾಯವಾಣಿ | • ಜಾನುವಾರುಗಳಿಗೆ 24/7 ನಿರಂತರ ಸೇವೆಯನ್ನು ಒದಗಿಸಲು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ರೈತರು ಸಹಾಯವಾಣಿಯನ್ನು ಪ್ರಾರಂಭಿಸಲಾಗಿದ್ದು, ಸಹಾಯವಾಣಿ ಸಂಖ್ಯೆ 8277100200 ಮೂಲಕ ಸಂಪರ್ಕಿಸಿ ಇಲಾಖೆಯ ತಾಂತ್ರಿಕ ಸೇವೆಯನ್ನು ಪಡೆಯಬಹುದಾಗಿದೆ. |
| 15 | ಕೃತಕ ಗರ್ಭಧಾರಣೆ | • ರಾಜ್ಯದಲ್ಲಿರುವ ಎಲ್ಲಾ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಕೃತಕ ಗರ್ಭಧಾರಣೆ ಮಾಡಲಾಗುತ್ತಿದೆ. |